ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಮಿತಿ (ಸಾರ್ವಜನಿಕ ಲೆಕ್ಕಪತ್ರ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ

ದಿನಾಂಕ : DATE : 03/07/2019

# ನೋಟಿಸ್‌ಗೆ ಹೆದರಿ ಸಾರ್ವಜನಿಕ ಲೆಕ್ಕಪತ್ರ ಸಭೆಗೆ ಮೊಹ್ಸಿನ್ ಹಾಜರ್!

3/7/19

ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸಾರ್ವಜನಿಕ ಲೆಕ್ಕಪತ್ರ ಸಮಿತಿ ಸಭೆಗೆ ಹಾಜರಾಗಲು ಸಾಧ್ಯವಾಗುವುದಿಲ್ಲವೆಂದು ಪತ್ರ ಕಳುಹಿಸಿದ್ದ ಐಎಎಸ್ ಅಧಿಕಾರಿಯೊಬ್ಬರು ನೋಟಿಸ್ ನೀಡಲಿದ್ದಾರೆಂಬ ಸುದ್ದಿ ತಿಳಿದು ಇದ್ದಕ್ಕಿದ್ದಂತೆ ಪ್ರತ್ಯಕ್ಷರಾಗಿ ಕ್ಷಮೆ ಕೋರಿದ್ದಾರೆ.



» ಕ್ಷಮೆ ಕೋರಿದ ಹಿನ್ನೆಲೆಯಲ್ಲಿ ಪ್ರಕರಣಕ್ಕೆ ತೆರೆ

ಲೋಕಸಭೆ ಚುನಾವಣೆ ವೇಳೆ ಪ್ರಧಾನಮಂತ್ರಿ ಪ್ರಯಾಣಿಸುತ್ತಿದ್ದ ಹೆಲಿಕಾಪ್ಟರ್ ಪರಿಶೀಲನೆ ನಡೆಸಿ ಅಮಾನತು ಶಿಕ್ಷೆಗೆ ಗುರಿಯಾಗಿದ್ದ ಐಎಎಸ್ ಅಧಿಕಾರಿ ಮೊಹಮ್ಮದ್ ಮೊಹ್ಸಿನ್ ಸಾರ್ವಜನಿಕ ಲೆಕ್ಕಪತ್ರ ಸಭೆಗೆ ಅಗೌರವ ತೋರಿದ್ದಾರೆ ಎಂಬ ಹಿನ್ನೆಲೆಯಲ್ಲಿ ಅಧ್ಯಕ್ಷತೆ ವಹಿಸಿದ್ದ ಶಾಸಕ ಮಾಧುಸ್ವಾಮಿ ನೋಟಿಸ್ ಜಾರಿ ಮಾಡಲು ಮುಂದಾಗಿದ್ದರು. ವಿಷಯ ತಿಳಿಯುತ್ತಿದ್ದಂತೆಯೇ ಮೊಹ್ಸಿನ್ ಸಭೆಗೆ ಹಾಜರಾಗಿ ಕ್ಷಮಾಪಣೆ ಕೋರಿದರು.

ವಿಧಾನಸೌಧದಲ್ಲಿ ಮಂಗಳವಾರ ನಡೆದ ಸಾರ್ವಜನಿಕ ಲೆಕ್ಕ ಪತ್ರ ಸಮಿತಿ ಸಭೆಯಲ್ಲಿ ವಸತಿ ಶಿಕ್ಷಣ ಸಂಸ್ಥೆಗೆ ಸಂಬಂಧಿಸಿದ ವಿಷಯ ಅಜೆಂಡಾದಲ್ಲಿತ್ತು. ಇಲಾಖೆ ಪ್ರಭಾರ ಹುದ್ದೆಯಲ್ಲಿದ್ದ ಮೊಹಮ್ಮದ್ ಮೊಹ್ಸಿನ್ ತಾವು ಸಭೆಗೆ ಹಾಜರಾಗುವುದಿಲ್ಲ ಎಂದು ಬೆಳಗ್ಗೆ ಪತ್ರ ಕಳುಹಿಸುವುದರ ಜತೆಗೆ ತಮ್ಮ ಅಧೀನ ಅಧಿಕಾರಿಯನ್ನು ಕಳುಹಿಸಿದ್ದರು.

ಸಮಿತಿ ಅಧ್ಯಕ್ಷ ಆರ್. ಅಶೋಕ್ ಗೈರುಹಾಜರಾಗಿದ್ದ ಕಾರಣ ಅಧ್ಯಕ್ಷತೆ ವಹಿಸಿದ್ದ ಮಾಧುಸ್ವಾಮಿ, ಬೇರೆಲ್ಲ ಸಭೆಗಳಿಗಿಂತ ಈ ಸಭೆ ಮುಖ್ಯ. ಸಮಿತಿ ಸಭೆಗೆ ಬರದೆ ಅಧಿಕಾರಿ ಅಗೌರವ ತೋರಿದ್ದಾರೆ. ಇವರ ವಿರುದ್ಧ ಕ್ರಮ ಕೈಗೊಳ್ಳಲು ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆಯಲು ಆಪ್ತ ಸಹಾಯಕರಿಗೆ ಸೂಚಿಸಿದರು. ವಿಷಯ ತಿಳಿದ ಮೊಹ್ಸಿನ್ ಸಭೆಗೆ ಹಾಜರಾದರು. ನಾನು ಸಮಿತಿಗೆ ಅಗೌರವ ತೋರಿಲ್ಲ. ಮುಖ್ಯ ಕಾರ್ಯದರ್ಶಿ ಕರೆದಿದ್ದರಿಂದ ಅವರ ಬಳಿ ಚರ್ಚೆಗೆ ಹೋಗಿದ್ದೆ. ಆಗಿರುವ ಘಟನೆಗೆ ಕ್ಷಮೆ ಕೋರುತ್ತೇನೆ ಎಂದು ತಿಳಿಸಿದರು. ಮಾಧುಸ್ವಾಮಿ ಎಚ್ಚರಿಕೆ ನೀಡಿ ಪ್ರಕರಣ ಕೈಬಿಟ್ಟರು ಎಂದು ಮೂಲಗಳು ತಿಳಿಸಿವೆ.